ಕರ್ನಾಟಕ ಸರ್ಕಾರ

ನಂ. : ವನಇ 142 ಎಂ ಎಸ್‌ಎಕ್ಸ್ 95

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 12.1.1996

# ಅಧಿಸೂಚನೆ

ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಕಾಯಿದೆ 1961 (ಕರ್ನಾಟಕ ಕಾಯಿದೆ ನಂ. 11-1963 ಮತ್ತು 1964ನೇ ಪರಿಷ್ಕೃತ ಕಾಯಿದೆ 1964)ಎ 4ಎ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನೀಡಿರುವ ಅಧಿಕಾರವನ್ನು ಚಲಾಯಿಸುತ್ತಾ ಕರ್ನಾಟಕ ಸರ್ಕಾರವು ಈ ಮೂಲಕ ದಿನಾಂಕ : 12.1.1996) (From the date of notification) ರಂದು ಜಾರಿಗೆ ಬರುವಂತೆ ಬೆಂಗಳೂರು ನಗರಕ್ಕೆ ಯೋಜಿತ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಸಲುವಾಗಿ ಈ ಕೆಳಗೆ ನಮೂದಿಸಿರುವ ಷೆಡ್ಯೂಲ್-1 ರಲ್ಲಿ ವಿವರಿಸಿರುವ ಗ್ರಾಮ ಮತ್ತು ಪಟ್ಟಣಗಳ ಸ್ಥಳಗಳನ್ನೊಳಗೊಂಡಂತೆ ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಿದೆ ಮತ್ತು ಇದನ್ನು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರದೇಶವೆಂದು ಕರೆಯಲ್ಪಡುವುದು. ಈ ಪ್ರದೇಶದಲ್ಲಿ ಬರುವ ಗ್ರಾಮಗಳನ್ನು ಷೆಡ್ಯೂಲ್-1 ರಲ್ಲಿ ಮತ್ತು ಈ ಪ್ರದೇಶದ ಗಡಿಯನ್ನು ಷೆಡ್ಯೂಲ್-2 ರಲ್ಲಿ ವಿವರಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

sd/-
(ಸಿದ್ಧರಾಮಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ ವಸತಿ ಮತ್ತು
ನಗರಾಭಿವೃದ್ಧಿ ಇಲಾಖೆ

ಇವರಿಗೆ :

1) ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ : ಕಂದಾಯ ಇಲಾಖೆ, ಬೆಂಗಳೂರು.
2) ಮೆಟ್ರೋಪಾಲಿಟನ್ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3) ಅಧ್ಯಕ್ಷರು, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4) ಅಧ್ಯಕ್ಷರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
5) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
6) ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
8) ನಗರ ಯೋಜನಾ ಜಂಟಿ ನಿರ್ದೇಶಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
9) ಅಧೀನ ಕಾರ್ಯದರ್ಶಿ ಸಿಆಸುಇ (ಸಚಿವ ಸಂಪುಟ ಶಾಖೆ) ವಿಧಾನಸೌಧ, ಬೆಂಗಳೂರು
10) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ.